ಡಾ. ರಜನೀಶ್ ಗೋಯೆಲ್, ಭಾ.ಆ.ಸೇ.,
ಮುಖ್ಯ ಕಾರ್ಯದರ್ಶಿ
Dr. RAJNEESH GOEL, I.A.S.,
Chief Secretary

ಕರ್ನಾಟಕ ಸರ್ಕಾರ
Government of Karnataka

ಸಂಖ್ಯೆ: ಮುಕಾ/721395S /2024

23ನೇ ಜನವರಿ, 2024.

## ಟಿಪ್ಪಣಿ

ಮಾನ್ಯ ಮುಖ್ಯಮಂತ್ರಿಯವರ ದಿನಾಂಕ: 09-01-2024 ರ ಟಿಪ್ಪಣಿಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿದೆ.

ಸದರಿ ಟಿಪ್ಪಣಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ರಾಜ್ಯ ಸರ್ಕಾರದ ಕೆಲವು ಇಲಾಖೆಗಳಲ್ಲಿ / ಸಚಿವಾಲಯದಲ್ಲಿ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿದ ಅಧಿಕಾರಿ/ನೌಕರರನ್ನು ಅನಗತ್ಯವಾಗಿ ಹುದ್ದೆಗಳನ್ನು ಸೃಜಿಸಿ, ಸಮಾಲೋಚಕರು/ವಿಶೇಷ ಸಂಪನ್ಮೂಲ ವ್ಯಕ್ತಿಗಳನ್ನಾಗಿ ಹಾಗೂ ಕೆಲವು ಗ್ರೂಪ್-ಎ ವೃಂದದ ಹುದ್ದೆಗಳಿಗೂ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿದ್ದು, ಸದರಿ ನಿವೃತ್ತ ನೌಕರರಿಗೆ ವೇತನ, ವಾಹನ ಸೌಲಭ್ಯ ಇನ್ನಿತರೆ ಸೌಲಭ್ಯಗಳನ್ನು ನೀಡಲಾಗುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚುವರಿ ಆರ್ಥಿಕ ಹೊರೆಯಾಗುವುದಲ್ಲದೆ, ಕಾರ್ಯಕ್ಷಮತೆಯ ಗುಣಮಟ್ಟ ಹಾಗೂ ಉತ್ತರದಾಯಿತ್ವದ ಕೊರತೆಯೂ ಎದ್ದು ಕಾಣುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳಲ್ಲಿ ಹಾಲಿ ಗುತ್ತಿಗೆ/ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ಅಧಿಕಾರಿ/ನೌಕರರನ್ನು ಕೂಡಲೇ ಸೇವೆಯಿಂದ ಬಿಡುಗಡೆಗೊಳಿಸಿ, ಸದರಿ ಹುದ್ದೆಗಳಿಗೆ ಹಾಲಿ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿ/ನೌಕರರುಗಳನ್ನು ನಿಯೋಜನೆ ಮಾಡಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಆದ್ದರಿಂದ, ಕರ್ನಾಟಕ ಸರ್ಕಾರ ಸಚಿವಾಲಯ ಸೇರಿದಂತೆ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಲಿ ಗುತ್ತಿಗೆ/ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ಅಧಿಕಾರಿ/ನೌಕರರನ್ನು ಕೂಡಲೇ ಸೇವೆಯಿಂದ ಬಿಡುಗಡೆಗೊಳಿಸಿ, ಸದರಿ ಹುದ್ದೆಗಳಿಗೆ ಹಾಲಿ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿ/ನೌಕರರುಗಳನ್ನು ನಿಯೋಜನೆ ಮಾಡಲು ಕೂಡಲೇ ಅಗತ್ಯ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಸೂಚಿಸಿದೆ.

**(ಡಾ|| ರಜನೀಶ್ ಗೋಯೆಲ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ:**
ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ.

ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನಸೌಧ, ಬೆಂಗಳೂರು – 560 001, ದೂರವಾಣಿ ಕಛೇರಿ: +91-80-22252442 / 22033300 ಫ್ಯಾಕ್ಸ್: +91-80-22258913
Room No. 320, 3rd Floor, Vidhana Soudha, Bengaluru - 560 001, Phone. off. +91-80-22252442 / 22033300 Fax: +91-80-22258913
E-mail : cs@karnataka.gov.in

ಸಿದ್ದರಾಮಯ್ಯ
ಮುಖ್ಯಮಂತ್ರಿ

ವಿಧಾನ ಸೌಧ
ಬೆಂಗಳೂರು – 560 001

09.01.2024
ದಿನಾಂಕ..........................

ಸಂ. ಮು.ಮಂ./ಆ.ಕಾ./ /2024

# ಟಿಪ್ಪಣಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ರಾಜ್ಯ ಸರ್ಕಾರದ ಕೆಲವು ಇಲಾಖೆಗಳಲ್ಲಿ/ಸಚಿವಾಲಯದಲ್ಲಿ ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿದ ಅಧಿಕಾರಿ/ ನೌಕರರನ್ನು ಅನಗತ್ಯವಾಗಿ ಹುದ್ದೆಗಳನ್ನು ಸೃಜಿಸಿ ಸಮಾಲೋಚಕರು/ ವಿಶೇಷ ಸಂಪನ್ಮೂಲ ವ್ಯಕ್ತಿಗಳನ್ನಾಗಿ ಹಾಗೂ ಕೆಲವು ಗ್ರೂಪ್-ಎ ವೃಂದದ ಹುದ್ದೆಗಳಿಗೂ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿರುವುದು ಗಮನಕ್ಕೆ ಬಂದಿರುತ್ತದೆ. ಸದರಿ ನಿವೃತ್ತ ನೌಕರರಿಗೆ ವೇತನ, ವಾಹನ ಸೌಲಭ್ಯ ಇನ್ನಿತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚುವರಿ ಆರ್ಥಿಕ ಹೊರೆಯಾಗುವುದಲ್ಲದೆ, ಕಾರ್ಯಕ್ಷಮತೆಯ ಗುಣಮಟ್ಟ ಹಾಗೂ ಉತ್ತರದಾಯಿತ್ವದ ಕೊರತೆಯೂ ಎದ್ದು ಕಾಣುತ್ತಿದೆ.

ಆದ್ದರಿಂದ, ಸದರಿ ಹುದ್ದೆಗಳಿಗೆ ಹಾಲಿ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿ/ ನೌಕರರುಗಳನ್ನು ನಿಯೋಜನೆ ಮಾಡಲು ಹಾಗೂ ವಿವಿಧ ಇಲಾಖೆಗಳಲ್ಲಿ ಹಾಲಿ ಗುತ್ತಿಗೆ/ಹೊರ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ನೌಕರರನ್ನು ಕೂಡಲೇ ಸೇವೆಯಿಂದ ಬಿಡುಗಡೆಗೊಳಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.

(ಸಿದ್ದರಾಮಯ್ಯ)

ಮುಖ್ಯ ಕಾರ್ಯದರ್ಶಿ
ಕರ್ನಾಟಕ ಸರ್ಕಾರ.